ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರ ವೇತನದ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

940 (1223) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿಶ್ವವಿದ್ಯಾಲಯಗಳು ಯಾವುವು ; ಇವುಗಳನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ ; ಹಾಲಿ ಕಾರ್ಯನಿರ್ವಹಿಸುತ್ತಿರುವ ಕುಲಪತಿಗಳು, ಕುಲಸಚಿವರ ಹೆಸರು ಸಮೇತ ವಿವರವಾದ ಮಾಹಿತಿ ನೀಡುವುದು;

(ಆ) ಮಹಾರಾಣಿ ಕ್ಲಷ್ಟರ್ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ ; ಇದರ ಉದ್ದೇಶಗಳೇನು ; ಇದರ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಮಹಾರಾಣಿ ಕ್ಲಷ್ಟರ್ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ/ಸಂಚಿತ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಸಿಬ್ಬಂದಿಗಳು ಎಷ್ಟು ; (ಕ್ರಮವಾಗಿ ಹೆಸರು, ಹುದ್ದೆಯ ಪದನಾಮ, ವಿಳಾಸ ಹಾಗೂ ಸೇವೆಗೆ ಸೇರಿದ ದಿನಾಂಕದೊಂದಿಗೆ ಮಾಹಿತಿ ನೀಡುವುದು)

(ಈ) ಸದರಿ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ/ಸಂಚಿತ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಸಿಬ್ಬಂದಿಗಳಿಗೆ ಕಳೆದ 8 ತಿಂಗಳುಗಳಿಂದ ವೇತನ ನೀಡದಿರಲು ಕಾರಣಗಳೇನು;

(ಉ) ಯಾವ ಕಾಲಮಿತಿಯೊಳಗೆ ಇವರಿಗೆ ವೇತನ ಪಾವತಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?